ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1284
2. ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಠೋಡ್
3. ಉತ್ತರಿಸಬೇಕಾದ ದಿನಾಂಕ : 08.03.2022
4. ಉತ್ತರಿಸುವ ಸಚಿವರು: ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಸಹಕಾರಿ ಕ್ಷೇತ್ರದ ಎಷ್ಟು ಸಕ್ಕರೆ ಕಾರ್ಖಾನೆಗಳು ನಷ್ಟದಲ್ಲಿವೆ;	ಪ್ರಸ್ತುತ ರಾಜ್ಯದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಒಟ್ಟು 14 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಎಲ್ಲಾ ಕಾರ್ಖಾನೆಗಳು ನಷ್ಟದಲ್ಲಿರುತ್ತವೆ.
(ಆ)	ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಲಾಭದತ್ತ ಕೊಂಡೊಯ್ಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ದುಡಿಯುವ ಬಂಡವಾಳದ ಕೊರತೆ ಮತ್ತು ಆರ್ಥಿಕ ನಷ್ಟದಿಂದ ಹಾಗೂ ಇನ್ನಿತರೆ ಆಡಳಿತಾತ್ಮಕ ಕಾರಣಗಳಿಂದಾಗಿ ಸ್ಥಗಿತಗೊಂಡಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಕಬ್ಬು ಬೆಳೆಗಾರ ರೈತರ ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಖಾಸಗಿಯವರಿಗೆ ದೀರ್ಘಾವಧಿಯ ಮೇಲೆ ಗುತ್ತಿಗೆ ನೀಡುವುದರ ಮೂಲಕ ಪುನಃಶ್ಚೇತನಗೊಳಿಸುವುದು ಸರ್ಕಾರದ ಪ್ರಸ್ತುತ ನೀತಿಯಾಗಿರುತ್ತದೆ. ಅದರಂತೆ ಇದುವರೆಗೆ 9 ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು LROT (Lease Rehabilitate Operate Transfer) ಮತ್ತು BOOT (Build Own Operate Transfer) ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲಾಗಿದೆ. ಆ ಮೂಲಕ ರೈತರ ಮತ್ತು ಕಾರ್ಮಿಕರ ಹಿತ ಕಾಪಾಡುವುದರೊಂದಿಗೆ ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತಗೊಳಿಸಲಾಗಿದೆ. ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ನಷ್ಟದಲ್ಲಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತಗೊಳಿಸಲು ಸರ್ಕಾರದಿಂದ ಬಡ್ಡಿರಹಿತ ಸಾಲ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
(ಇ)	ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರದಿಂದ ಬಡ್ಡಿರಹಿತ ಸಾಲ ನೀಡಿ, ಕಾರ್ಖಾನೆಗಳ ಅಭಿವೃದ್ಧಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)	

ಸಂಖ್ಯೆ: ಸಿಐ 64 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು